ಕರ್ನಾಟಕ ಸರ್ಕಾರ

**ಸಂಖ್ಯೆ:** ಸಿಆಸುಇ 40 ಸೇಇವಿ 2014

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 20.10.2014.

**ಸುತ್ತೋಲೆ**

**ವಿಷಯ:** ಲೋಕಾಯುಕ್ತ ಸಂಸ್ಥೆಯಿಂದ ದಾಳಿಗೆ ಒಳಗಾಗಿರುವ ಸರ್ಕಾರಿ ನೌಕರರನ್ನು ಲೋಕಾಯುಕ್ತರು ಮಾಡುವ ಶಿಫಾರಸ್ಸಿನ ಮೇರೆಗೆ ಸೇವೆಯಿಂದ ಅಮಾನತ್ತುಗೊಳಿಸುವ ಕುರಿತು ಸೂಚನೆಗಳು.

**ಉಲ್ಲೇಖ:**
1. ದಿನಾಂಕ:11.05.2009ರ ಸುತ್ತೋಲೆ ಸಂಖ್ಯೆ: ಸಿಆಸುಇ 17 ಸೇಇವಿ 2009
2. ದಿನಾಂಕ:28.09.2011ರ ಸುತ್ತೋಲೆ ಸಂಖ್ಯೆ: ಸಿಆಸುಇ 42 ಸೇಇವಿ 2011

ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10(1)ರನ್ವಯ, ನೇಮಕಾತಿ ಪ್ರಾಧಿಕಾರ ಅಥವಾ ಅವನು ಯಾವ ಪ್ರಾಧಿಕಾರಿಗೆ ಅಧೀನನಾಗಿರುವನೋ ಆ ಯಾವುದೇ ಪ್ರಾಧಿಕಾರಿಯು ಅಥವಾ ಈ ಬಗ್ಗೆ ಸರ್ಕಾರದಿಂದ ಅಧಿಕಾರ ಪಡೆದ ಇತರ ಯಾವುದೇ ಪ್ರಾಧಿಕಾರಿಯು ಸರ್ಕಾರಿ ನೌಕರನನ್ನು ಈ ನಿಯಮದಲ್ಲಿ ವಿವರಿಸಿರುವ ಸಂದರ್ಭಗಳಲ್ಲಿ ಅಮಾನತ್ತಿನಲ್ಲಿ ಇಡಬಹುದು. ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10(2)ರಲ್ಲಿ ನಮೂದಿಸಿದ ಸಂದರ್ಭಗಳಲ್ಲಿ ನೇಮಕಾತಿ ಪ್ರಾಧಿಕಾರಿಯ ಆದೇಶದ ಮೂಲಕ ಅಮಾನತ್ತಿನಲ್ಲಿಡಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10(1)(ಎಎ)ರನ್ವಯ ಸರ್ಕಾರಿ ನೌಕರನನ್ನು ಭ್ರಷ್ಟಾಚಾರ ಪ್ರತಿಬಂಧ ಅಧಿನಿಯಮ, 1988ರ ಅಡಿಯಲ್ಲಿ ಅಥವಾ ಇತರೆ ಯಾವುದೇ ಕಾನೂನಿನಡಿಯಲ್ಲಿ ಅಪರಾಧಗಳ ತನಿಖೆ ನಡೆಸಲು ಅಧಿಕಾರ ಹೊಂದಿದ ವ್ಯಕ್ತಿಗಳಿಗೆ, ಅವನು ತನ್ನ ಸರ್ಕಾರಿ ಕರ್ತವ್ಯ ನಿರ್ವಹಿಸುವಾಗ ಯಾವುದೇ ಕಾಲದಲ್ಲಿ ಅವನ ಬಲ್ಲ ಆದಾಯದ ಮೂಲಗಳಿಗಿಂತ ಹೆಚ್ಚಿನ ಆರ್ಥಿಕ ಸಂಪನ್ಮೂಲಗಳನ್ನು ಅಥವಾ ಆಸ್ತಿಯನ್ನು ಅವನು ಹೊಂದಿದ್ದಾನೆಂದು ಅಥವಾ

...2

ಹೊಂದಿದ್ದನೆಂದು ತೋರಿಸುವ ಮೇಲ್ನೋಟದ ಸಾಕ್ಷ್ಯವಿರುವಲ್ಲಿ, ಅಮಾನತ್ತಿನಲ್ಲಿಡಲು ಅಧಿಕಾರ ಹೊಂದಿದ ಪ್ರಾಧಿಕಾರಿಯು ಅಂತಹ ಸರ್ಕಾರಿ ನೌಕರನನ್ನು ಅಮಾನತ್ತಿನಲ್ಲಿಡಬಹುದು. ಇಂತಹ ಮೇಲ್ನೋಟದ ಸಾಕ್ಷ್ಯಗಳು ಲಭ್ಯವಾಗಬೇಕಾದರೆ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗವು ದಾಳಿ ಸಂದರ್ಭದಲ್ಲಿ ಪತ್ತೆ ಮಾಡಲಾದ ಆರ್ಥಿಕ ಸಂಪನ್ಮೂಲಗಳು ಮತ್ತು ಆಸ್ತಿಗಳ ವಿವರಗಳನ್ನು ಕುರಿತಂತೆ ಲೋಕಾಯುಕ್ತ ಕಛೇರಿಯಿಂದ ಸಕ್ಷಮ ಪ್ರಾಧಿಕಾರಕ್ಕೆ ಮಾಹಿತಿ ಬರಬೇಕಾಗುತ್ತದೆ.

ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10(3)ರನ್ವಯ ಸರ್ಕಾರಿ ನೌಕರನನ್ನು ಅಮಾನತ್ತಿನಲ್ಲಿಡಲು ಸಕ್ಷಮನಾದ ಪ್ರಾಧಿಕಾರಿಯು, ಪ್ರಕರಣಕ್ಕೆ ಸಂಬಂಧಿಸಿದ ಸುಸಂಗತ ವಿಷಯ ಸಾಮಗ್ರಿಯನ್ನು ಪರಿಶೀಲಿಸತಕ್ಕದ್ದು ಮತ್ತು ಸರ್ಕಾರಿ ನೌಕರನ ವಿರುದ್ಧ ಮಾಡಿದ ಆರೋಪಗಳನ್ನು ಸಮರ್ಥಿಸುವ ಮೇಲ್ನೋಟದ ಸಾಕ್ಷ್ಯ ಇದೆಯೇ ಎಂಬುದನ್ನು ಪರಿಶೀಲಿಸತಕ್ಕದ್ದು ಮತ್ತು ಹಾಗೆ ಪರಿಶೀಲಿಸಿದ ಮೇಲೆ ಮೇಲ್ನೋಟದ ಸಾಕ್ಷ್ಯ ಇದೆಯೆಂದು ತನಗೆ ಮನದಟ್ಟಾದರೆ, ಆ ಪ್ರಾಧಿಕಾರಿಯು ಸಂಬಂಧಪಟ್ಟ ಸರ್ಕಾರಿ ನೌಕರನನ್ನು ಅಮಾನತ್ತಿನಲ್ಲಿಡಬಹುದು. ನಿಯಮ 10(3)ರ ಅಗತ್ಯತೆಗಳನ್ನು ಪೂರೈಸಿಕೊಂಡು ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿಡುವ ಬಗ್ಗೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಮಾಡಿದ ಅವಲೋಕನೆ ಹಿನ್ನೆಲೆಯಲ್ಲಿ ಉಲ್ಲೇಖ (1)ರಲ್ಲಿನ ದಿನಾಂಕ:11.05.2009ರ ಸುತ್ತೋಲೆ ಸಂಖ್ಯೆ:ಸಿಆಸುಇ 17 ಸೇಇವಿ 2009ನ್ನು ಹೊರಡಿಸಲಾಗಿದೆ.

ಭ್ರಷ್ಟಾಚಾರ ತಡೆ ಅಧಿನಿಯಮ 1988ರಡಿ ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗವು ಘೋಷಿತ ಆಸ್ತಿಗಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುವ ಸರ್ಕಾರಿ ಅಧಿಕಾರಿ/ನೌಕರರ ಮೇಲೆ ದಾಳಿ ಮಾಡಿರುವ ಪ್ರಕರಣಗಳಲ್ಲಿ ಮೇಲ್ನೋಟಕ್ಕೆ ಸರ್ಕಾರಿ ಅಧಿಕಾರಿ/ನೌಕರರು ತಪ್ಪಿತಸ್ಥರೆಂದು ಕಂಡು ಬಂದಾಗ ತನಿಖೆಯು ಸುಸೂತ್ರವಾಗಿ ನಡೆಯಬೇಕೆಂಬ ಉದ್ದೇಶದಿಂದ ಸಂಬಂಧಿತ ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿರಿಸಲು ಲೋಕಾಯುಕ್ತ ಸಂಸ್ಥೆಯ ಪೊಲೀಸ್ ವಿಭಾಗವು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದಾಗ ದಾಳಿಗೊಳಗಾದ ಸರ್ಕಾರಿ ನೌಕರರನ್ನು ಅಮಾನತ್ತುಗೊಳಿಸಲು ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957 ನಿಯಮ 10(1)(ಎಎ)ರನ್ವಯ ಆಸ್ಪದವಿದೆ. ಆದುದರಿಂದ ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿಡಲು ಅಧಿಕಾರ ಹೊಂದಿರುವ ಸಕ್ಷಮ ಪ್ರಾಧಿಕಾರಿಗಳು ಲೋಕಾಯುಕ್ತ ದಾಳಿ ಪ್ರಕರಣ ತಕ್ಷಣ ಗಮನಕ್ಕೆ ಬಂದ ಕೂಡಲೇ

ಕರ್ನಾಟಕ ಲೋಕಾಯುಕ್ತದಲ್ಲಿನ ಸಂಬಂಧಪಟ್ಟ ಅಧಿಕಾರಿಗಳಿಂದ ದಾಳಿಯ ವಿವರಗಳನ್ನು ತಕ್ಷಣವೇ ಪಡೆದು ಮೇಲ್ಕಂಡ ನಿಯಮಗಳ ನಿಯಮ 10(1)(ಎಎ) ಮತ್ತು ನಿಯಮ 10(3)ರನ್ವಯ ಪರಿಶೀಲಿಸಿ ಮೇಲ್ನೋಟದ ಸಾಕ್ಷ್ಯವಿರುವುದು ಸಕ್ಷಮ ಪ್ರಾಧಿಕಾರಿಗೆ ಖಚಿತವಾದಲ್ಲಿ ತಪ್ಪದೇ ಕಟ್ಟು ನಿಟ್ಟಾಗಿ ಅಂತಹ ಸರ್ಕಾರಿ ನೌಕರರನ್ನು ಅಮಾನತ್ತಿನಲ್ಲಿಡಲು ಕ್ರಮ ಜರುಗಿಸುವಂತೆ ಸೂಚಿಸಲಾಗಿದೆ.

ಮುಂದುವರಿದು ಉಲ್ಲೇಖ (2)ರಲ್ಲಿನ ದಿನಾಂಕ.28.9.2011ರ ಸುತ್ತೋಲೆಯಲ್ಲಿ ಸೂಚಿಸಿರುವಂತೆ ದಾಳಿಗೊಳಗಾಗಿ ಪ್ರಾಥಮಿಕ ತನಿಖೆಯ ನಂತರ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿ ಆರೋಪಿತ ಸರ್ಕಾರಿ ಅಧಿಕಾರಿ/ನೌಕರರನ್ನು ಅಮಾನತ್ತಿನಲ್ಲಿಟ್ಟ ನಂತರ, ಅವರನ್ನು ಸೇವೆಗೆ ಪುನರ್‌ಸ್ಥಾಪಿಸುವ ಮುನ್ನ ಲೋಕಾಯುಕ್ತ ಸಂಸ್ಥೆಯೊಂದಿಗೆ ಸಮಾಲೋಚಿಸತಕ್ಕದ್ದೆಂದು ಹಾಗೂ ಇಂತಹ ಅಧಿಕಾರಿ/ ನೌಕರರನ್ನು ಸೇವೆಯಲ್ಲಿ ಪುನರ್‌ಸ್ಥಾಪಿಸಲು ಲೋಕಾಯುಕ್ತದಿಂದ ಅನುಮತಿ ಪಡೆದಲ್ಲಿ ಅಂತಹ ಅಧಿಕಾರಿ/ನೌಕರರನ್ನು ಈ ಹಿಂದೆ ಸೇವೆ ಸಲ್ಲಿಸಿದ ಹುದ್ದೆಗೆ ನೇಮಿಸತಕ್ಕದ್ದಲ್ಲ ಮತ್ತು ಅವರನ್ನು ಬೇರೆ ಯಾವುದಾದರೂ ನಾನ್ ಎಕ್ಸಿಕ್ಯೂಟೀವ್ ಹುದ್ದೆಯಲ್ಲಿ ಪುನರ್‌ಸ್ಥಾಪಿಸಲು ಕ್ರಮಕೈಗೊಳ್ಳಬೇಕೆಂಬುದನ್ನು ಪುನ: ಒತ್ತಿ ಹೇಳಲಾಗಿದೆ.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ಮತ್ತು ಇಲಾಖಾ ಮುಖ್ಯಸ್ಥರುಗಳು ಈ ಸುತ್ತೋಲೆಯಲ್ಲಿರುವ ಸೂಚನೆಗಳನ್ನು ಪಾಲಿಸತಕ್ಕದ್ದು ಮತ್ತು ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಶಿಸ್ತು ಪ್ರಾಧಿಕಾರಿಗಳ / ನೇಮಕಾತಿ ಪ್ರಾಧಿಕಾರಿಗಳ ಗಮನಕ್ಕೆ ಈ ಸೂಚನೆಗಳನ್ನು ತರತಕ್ಕದ್ದು.

ಕೌಶಿಕ್ ಮುಖರ್ಜಿ
(ಕೌಶಿಕ್ ಮುಖರ್ಜಿ) 20/10/14
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಪ್ರತಿಗಳು:**

1. ಮಹಾಲೇಖಪಾಲರು, ಕರ್ನಾಟಕ, (ಅಕೌಂಟ್ಸ್/ಆಡಿಟ್)ಬೆಂಗಳೂರು
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
3. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
4. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು

...4

ECPS 22 15/11 ಲ. 88/ 887 15/11/14 15/11/14

5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು
6. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ –110 021.
7. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
8. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
9. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
11. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು– 560 009.
12. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
13. ಎಲ್ಲಾ ಇಲಾಖಾ ಮುಖ್ಯಸ್ಥರು
14. ಎಲ್ಲಾ ಪ್ರಾದೇಶಿಕ ಆಯುಕ್ತರು
15. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
16. ಸರ್ಕಾರದ ಎಲ್ಲಾ ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
17. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು

(* ಮುಖ ಪತ್ರದೊಂದಿಗೆ)